# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 283 (2003)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ನೇಮಕಾತಿ ಮುನ್ನ ಆದಾಯ ಮತ್ತು ಸಿಂಧುತ್ವ ಪ್ರಮಾಣ ಪತ್ರ ನೀಡುವ ಕುರಿತು

(ಅ) ರಾಜ್ಯದ ಸಿವಿಲ್ ಸೇವೆಗಳಿಗೆ ಆಯ್ಕೆ ಆದ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ನೇಮಕಾತಿ ಮಾಡುವ ಮುನ್ನ ಜಾತಿ ಆದಾಯ, ಸಿಂಧುತ್ವ ಪ್ರಮಾಣ ಪತ್ರ ಪಡೆಯುವುದು ಕಡ್ಡಾಯವಲ್ಲವೇ;

(ಆ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಅಭ್ಯರ್ಥಿಗಳ ಜಾತಿ ಆದಾಯ, ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡಲಾಗಿದೆ; ಮತ್ತು ಅಸಿಂಧುಗೊಳಿಸಲಾದ ಅಭ್ಯರ್ಥಿಗಳ ಸಂಖ್ಯೆ ಎಷು;್ಟ (ಜಿಲ್ಲಾವಾರು ವಿವರವನ್ನು ನೀಡುವುದು)

(ಇ) ಜಿಲ್ಲಾ ಆದಾಯ ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುವ ವೇಳೆ ನಿಗದಿಪಡಿಸಿದ ಆದಾಯ ಮಿತಿಗಿಂತ ಹೆಚ್ಚಾಗಿರುವ ಅಭ್ಯರ್ಥಿಗಳಿಗೆ ಸುಳ್ಳು ವರದಿಗಳನ್ನು ನೀಡಿ, ಸಿಂಧುತ್ವ ಪ್ರಮಾಣ ಪತ್ರಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ/ಸಿಬ್ಬಂದಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಜಿಲ್ಲಾವಾರು ವಿವರವನ್ನು ನೀಡುವುದು)